ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಪ್ರಥಮ ದರ್ಜೆ ಕಾಲೇಜುಗಳಲ್ಲಿ ಉಪನ್ಯಾಸಕರ ನೇಮಕಾತಿ ಬಗ್ಗೆ

ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ):-

628(683) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿಯಿರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳು ಎಷ್ಟು;

(ಆ) ಆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ;

(ಇ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;

(ಈ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಯು.ಜಿ.ಸಿ. ನಿಯಮಾವಳಿಯಂತೆ ವಿದ್ಯಾರ್ಹತೆ ಪಡೆದಿರುವವರನ್ನು ಖಾಯಂಗೊಳಿಸಲು ಸರ್ಕಾರಕ್ಕಿರುವ ಅಡೆ-ತಡೆಗಳೇನು?